ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಎತ್ತಿನಹೊಳೆ ಯೋಜನೆಗಾಗಿ ಭೂಸ್ವಾಧೀನ ಮಾಡಿಕೊಂಡಿರುವ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1289 (1509) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಯಲುಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ; ಜಮೀನು ಕಳೆದುಕೊಂಡಿರುವ ಸಂತ್ರಸ್ಥರ ಹೆಸರು ಮತ್ತು ಊರಿನ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು;

(ಆ) ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲು ಎಕರೆವಾರು ನಿಗಧಿಪಡಿಸಿರುವ ಬೆಲೆ ಎಷ್ಟು ; ಇದಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; ಮತ್ತು ಇದರಲ್ಲಿ ಪರಿಹಾರ ನೀಡಿರುವ ಮೊತ್ತವೆಷ್ಟು;

(ಇ) ಎತ್ತಿನಹೊಳೆ ಯೋಜನೆಯಡಿ ಇದುವರೆಗೂ ಪರಿಹಾರ ಪಡೆದಿರುವ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು;

(ಈ) ಎತ್ತಿನಹೊಳೆ ಯೋಜನೆಯಡಿ ಇದುವರೆಗೂ ಪರಿಹಾರ ಪಡೆಯದ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು; ಪರಿಹಾರ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ?